ಇ) ಇಂಡಿ ಮತ ಕ್ಷೇತ್ರದಲ್ಲಿ ಔಷಧಿಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಬಂದಿದ್ದಲ್ಲಿ ಔಷಧಿ ಪೂರೈಸಲು ಸರ್ಕಾರದವರು ತೆಗೆದುಕೊಳ್ಳುವ ಕ್ರಮವೇನು?

ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ವೈದ್ಯರು - 13
ಸಿಬ್ಬಂದಿ - 69

ಆ) ಇಲ್ಲ.

ಇ) ಔಷಧಿಗಳನ್ನು ಪೂರೈಕೆ ಮಾಡಲಾಗುತ್ತದೆ.

ಇಡಗೂರು ಗ್ರಾಮದ ಸರ್ಕಾರಿ ಪ್ರೌಡಶಾಲೆ ಕಟ್ಟಡ

395 - ಶ್ರೀ ಜಿ.ಎಸ್. ಶಿವನಂಜಪ್ಪ (ಗುಬ್ಬಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಬ್ಬಿ ತಾಲ್ಲೂಕಿನ ಸಿ.ಎಸ್. ಪುರ ಹೋಬಳಿಯ ಇಡಗೂರು ಗ್ರಾಮದಲ್ಲಿ 1983-84ನೇ ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲೆ ಮಂಜೂರಾಗಿದ್ದು ಕಟ್ಟಡವಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮವೇನು.

ಇ) 1995-96ನೇ ಸಾಲಿನ ಆಯವ್ಯಯದಲ್ಲಿ ಈ ಶಾಲಾ ಕಟ್ಟಡದ ನಿರ್ಮಾಣಕ್ಕೆ ಹಣ ಒದಗಿಸಲಾಗಿದೆಯೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಜಮೀನನ್ನು ಶಾಲೆಗೆ ಮಂಜೂರು ಮಾಡುವ ಪ್ರಕ್ರಿಯೆ ಜಿಲ್ಲಾಧಿಕಾರಿಗಳು, ತುಮಕೂರು ಇವರ ಹಂತದಲ್ಲಿ ನಡೆಯುತ್ತಿದೆ.

ಇ) ಶಾಲಾ ಕಟ್ಟಡ ನಿರ್ಮಾಣವನ್ನು 1995-96ನೇ ಸಾಲಿನ ಕ್ರಿಯಾ ಯೋಜನೆಯಡಿ ಸೇರಿಸಿ ನಿರ್ಮಾಣ ಕಾರ್ಯಕೈಗೊಳ್ಳಲು ಜಿಲ್ಲಾ ಪಂಚಾಯತ್ ಕಛೇರಿಗೆ ಕೋರಲಾಗಿದೆ.

URDU & MARATHI TEACHERS POSTS IN BELAGAM DISTRICT.

396 - Sri. B.I. Patil (Belagam) : Will the Minister for Primary and Secondary Education be pleased to State?